**All India Radio: Bangalore**
**National Bulletin In Kannada**
**24.04.2025 07.35 a.m.**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**

**<><><><>**

**ಮುಖ್ಯಾಂಶಗಳು**

- **ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆ : ಕೇಂದ್ರ ಸರ್ಕಾರದಿಂದ ನವದೆಹಲಿಯಲ್ಲಿಂದು ಸರ್ವಪಕ್ಷಗಳ ಸಭೆ**
- **ಪಹಲ್ಗಾಮ್ ದಾಳಿ : ೧೯೬೦ರ ಸಿಂಧೂ ಜಲ ಒಪ್ಪಂದ ಸ್ಥಗಿತ : ಅಟ್ಟಾರಿ ಸಮಗ್ರ ಚೆಕ್ ಪೋಸ್ಟ್ ಬಂದ್ ಸೇರಿ ಭಾರತದಿಂದ ಹಲವು ಕಠಿಣ ಕ್ರಮ**
- **ಪ್ರಧಾನಿ ನರೇಂದ್ರ ಮೋದಿ ಇಂದು ಬಿಹಾರಕ್ಕೆ ಭೇಟಿ : ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಕಾರ್ಯಕ್ರಮದಲ್ಲಿ ಭಾಗಿ**
- **ಚಾಮರಾಜನಗರದ ಮಲೆಮಹದೇಶ್ವರ ಬೆಟ್ಟದಲ್ಲಿ ಇಂದು ಕರ್ನಾಟಕ ಸರ್ಕಾರದ ವಿಶೇಷ ಸಚಿವ ಸಂಪುಟ ಸಭೆ**
- **ದೆಹಲಿಯಲ್ಲಿ ನಾಳೆಯಿಂದ ಎರಡನೇ ಏಷ್ಯನ್ ಯೋಗಾಸನ ಚಾಂಪಿಯನ್‌ಶಿಪ್ ಪಂದ್ಯಾವಳಿ ಆರಂಭ**

<><><><>

**ಪಹಲ್ಗಾಮ್ ಭಯೋತ್ಪಾದಕ ದಾಳಿ ಘಟನೆಯ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ನವದೆಹಲಿಯಲ್ಲಿಂದು ಸರ್ವಪಕ್ಷಗಳ ಸಭೆ ಕರೆದಿದೆ. ಸಂಜೆ ೬ ಗಂಟೆಗೆ ಸಂಸತ್ ಭವನದ ಸಂಕೀರ್ಣದಲ್ಲಿ ಸರ್ವಪಕ್ಷಗಳ ಸಭೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.**

<><><><>

**ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲಿ ಭಾರತವು ೧೯೬೦ರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವುದು ಮತ್ತು ತಕ್ಷಣದಿಂದ ಜಾರಿಗೆ ಬರುವಂತೆ ಅಟ್ಟಾರಿ ಸಮಗ್ರ ಚೆಕ್ ಪೋಸ್ಟ್ ಅನ್ನು ಮುಚ್ಚುವುದು ಸೇರಿದಂತೆ ಹಲವು ಕಠಿಣ ಕ್ರಮಗಳನ್ನು ಕೈಗೊಂಡಿದೆ.**

ಪ್ರಧಾನಿ ನರೇಂದ್ರ ಮೋದಿಯವರ ನಿವಾಸದಲ್ಲಿ ಕಳೆದ ರಾತ್ರಿ ನಡೆದ ಭದ್ರತೆಯ ಕುರಿತಾದ ಸಂಪುಟ ಸಮಿತಿ ಸಭೆಯಲ್ಲಿ ಒಟ್ಟಾರೆ ಭದ್ರತಾ ಸ್ಥಿತಿಗತಿ ಪರಿಶೀಲಿಸಲಾಯಿತು ಮತ್ತು ಎಲ್ಲಾ ಪಡೆಗಳು ಇನ್ನೂ ಹೆಚ್ಚಿನ ಜಾಗರೂಕತೆ ವಹಿಸುವಂತೆ ನಿರ್ದೇಶನ ನೀಡಲಾಯಿತು. ನವದೆಹಲಿಯಲ್ಲಿ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ. ಸಾರ್ಕ್ ವೀಸಾ ವಿನಾಯಿತಿ ಯೋಜನೆ ವೀಸಾಗಳಡಿಯಲ್ಲಿ ಪಾಕಿಸ್ತಾನಿ ಪ್ರಜೆಗಳಿಗೆ ಭಾರತಕ್ಕೆ ಪ್ರಯಾಣಿಸಲು ಅನುಮತಿ ನೀಡಲಾಗುವುದಿಲ್ಲ. ಪಾಕಿಸ್ತಾನಿ ಪ್ರಜೆಗಳಿಗೆ ಹಿಂದೆ ನೀಡಲಾದ ಎಸ್‌ವಿಇಎಸ್ ವೀಸಾಗಳನ್ನು ರದ್ದುಗೊಳಿಸಲಾಗಿದೆ. ಎಸ್‌ವಿಇಎಸ್ ವೀಸಾದಡಿಯಲ್ಲಿ ಪ್ರಸ್ತುತ ಭಾರತದಲ್ಲಿರುವ ಯಾವುದೇ ಪಾಕಿಸ್ತಾನಿ ಪ್ರಜೆ ಭಾರತವನ್ನು ಬಿಡಲು ೪೮ ಗಂಟೆಗಳ ಕಾಲಾವಕಾಶವಿದೆ ಎಂದು ಹೇಳಿದರು. ನವದೆಹಲಿಯ ಪಾಕಿಸ್ತಾನಿ ರಾಯಭಾರ ಕಚೇರಿಯಲ್ಲಿರುವ ರಕ್ಷಣಾ/ಮಿಲಿಟರಿ, ನೌಕಾ ಮತ್ತು ವಾಯು ಸಲಹೆಗಾರರನ್ನು ಪರ್ಸೋನಾ ನಾನ್ ಗ್ರ್ಯಾಟಾ ಎಂದು ಘೋಷಿಸಲಾಗಿದೆ. ಅವರು ಭಾರತ ತೊರೆಯಲು ಒಂದು ವಾರ ಸಮಯವಿದೆ ಎಂದು ವಿದೇಶಾಂಗ ಕಾರ್ಯದರ್ಶಿ ಮಾಹಿತಿ ನೀಡಿದರು.

ಧ್ವನಿ: ವಿಕ್ರಂ ಮಿಸ್ರಿ

ಇಸ್ಲಾಮಾಬಾದ್‌ನಲ್ಲಿರುವ ಭಾರತೀಯ ಹೈಕಮಿಷನ್‌ನಿಂದ ಭಾರತ ತನ್ನದೇ ಆದ ರಕ್ಷಣಾ/ನೌಕಾಪಡೆ/ವಾಯು ಸಲಹೆಗಾರರನ್ನು ವಾಪಸ್ ಕರೆಯಿಸಿಕೊಳ್ಳಲಿದೆ. ಪ್ರಧಾನಿ ಅಧ್ಯಕ್ಷತೆಯಲ್ಲಿ ಪಹಲ್ಗಾಮ್‌ನಲ್ಲಿ ಮಂಗಳವಾರ ನಡೆದ ಸಭೆಯಲ್ಲಿ ಭಯೋತ್ಪಾದಕ ದಾಳಿಯ ಬಗ್ಗೆ ಸವಿಸ್ತಾರವಾಗಿ ವಿವರಿಸಲಾಯಿತು ಎಂದು ಮಿಸ್ರಿ ಹೇಳಿದರು.  ಜಮ್ಮು ಮತ್ತು ಕಾಶ್ಮೀರದಲ್ಲಿ ಚುನಾವಣೆಗಳು ಯಶಸ್ವಿಯಾಗಿ ನಡೆದ ನಂತರ ಮತ್ತು ಆರ್ಥಿಕ ಬೆಳವಣಿಗೆ ಮತ್ತು ಅಭಿವೃದ್ಧಿಯತ್ತ ಅದರ ಸ್ಥಿರ ಪ್ರಗತಿಯ ಹಿನ್ನೆಲೆಯಲ್ಲಿ ಈ ದಾಳಿ ನಡೆದಿದೆ. ಸಿಸಿಎಸ್ ದಾಳಿಯನ್ನು ಕಟು ಶಬ್ದಗಳಲ್ಲಿ ಖಂಡಿಸಿತು ಮತ್ತು ಬಲಿಯಾದ ಕುಟುಂಬಗಳಿಗೆ ಸಂತಾಪವನ್ನು ವ್ಯಕ್ತಪಡಿಸಿತು ಮತ್ತು ಗಾಯಗೊಂಡವರು ಶೀಘ್ರ ಚೇತರಿಸಿಕೊಳ್ಳಲಿ ಎಂದು ಆಶಿಸಿತು.

<><><><>

ಪಹಲ್ಗಾಮ್ ದಾಳಿಯಲ್ಲಿ ಮೃತರಾದ ರಾಜ್ಯದ ಇಬ್ಬರ ಪಾರ್ಥಿವ ಶರೀರಗಳನ್ನು ಕಳೆದ ರಾತ್ರಿ ಬೆಂಗಳೂರಿಗೆ ತರಲಾಯಿತು. ವಿಶೇಷ ವಿಮಾನದಲ್ಲಿ ಹುತಾತ್ಮರಾದ ಶಿವಮೊಗ್ಗದ ಮಂಜುನಾಥ್ ಹಾಗೂ ಬೆಂಗಳೂರಿನ ಭರತ್ ಭೂಷಣ್ ಅವರ ಪಾರ್ಥಿವ ಶರೀರಗಳನ್ನು ತರಲಾಗಿದ್ದು, ಅವರಿಗೆ ಗೌರವ ನಮನ ಸಲ್ಲಿಸಲಾಯಿತು. ಬಳಿಕ ಮಂಜುನಾಥ್ ಅವರ ಪಾರ್ಥಿವ ಶರೀರವನ್ನು ಶಿವಮೊಗ್ಗಕ್ಕೆ ಕೊಂಡೊಯ್ಯಲಾಗುತ್ತದೆ. ಭರತ್ ಭೂಷಣ್ ಅವರ ಪಾರ್ಥಿವ ಶರೀರರವನ್ನು ಬೆಂಗಳೂರಿನ ಮತ್ತಿಕೆರೆಯ ಅವರ ನಿವಾಸದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗುವುದು. ನಂತರ ಅಂತ್ಯಕ್ರಿಯೆ ನಡೆಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ. ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ ಪಾರ್ಥಿವ ಶರೀರಗಳಿಗೆ ಭಾವಪೂರ್ಣ ನಮನಗಳನ್ನು ಸಲ್ಲಿಸಿದ್ದು, ಈ ದುರಂತದ ಸಮಯದಲ್ಲಿ ಇಡೀ ದೇಶ ಹುತಾತ್ಮರ ಕುಟುಂಬಗಳೊಂದಿಗೆ ನಿಲ್ಲಲಿದೆ ಎಂದು ತಿಳಿಸಿದ್ದಾರೆ.

<><><>

ವ್ಯಾಪಾರ ಮತ್ತು ನೀತಿ ಅನಿಶ್ಚಿತತೆಗಳ ನಡುವೆ ಭಾರತದ ಆರ್ಥಿಕತೆ ಉತ್ತಮ ರೀತಿಯಲ್ಲಿ ಸಾಗಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಹೇಳಿದ್ದಾರೆ.  ಜಾಗತಿಕವಾಗಿ ಪ್ರಗತಿ ಕುಂಠಿತವಾಗಿದೆ ಆದರೂ ಸಹ ಭಾರತದ ಆರ್ಥಿಕ ಪ್ರಗತಿ ಗ್ರಾಹಕರು ಹಾಗೂ ಹೂಡಿಕೆದಾರರ ವಿಶ್ವಾಸದಿಂದ ವಿಚಲಿತವಾಗದೇ ದೇಶೀಯ ಬೇಡಿಕೆ ಆಧರಿಸಿ ಉತ್ತಮ ರೀತಿಯಲ್ಲಿ ಮುನ್ನಡೆಯುತ್ತಿದೆ ಎಂದು ಹೇಳಿದರು. ಹಣಕಾಸು ನೀತಿ ಸಮಿತಿ ನಡಾವಳಿಯಂತೆ ಕಚ್ಚಾತೈಲ ಬೆಲೆ ಮತ್ತು ಅಗತ್ಯ ವಸ್ತುಗಳ ಬೆಲೆ ಸ್ವಲ್ಪ ಕುಸಿತವಾಗಿರುವುದು ಆರ್ಥಿಕತೆಗೆ ಸಕಾರಾತ್ಮಕ ಬೆಳವಣಿಗೆಗೆ ನೆರವಾಗಿದೆ. ಭಾರತದ ಆರ್ಥಿಕ ಪ್ರಗತಿ ಶೇಕಡ ೬.೫ ರಷ್ಟು ಎಂದು ಪರಿಗಣಿಸಿದರೂ ಸಹ ಅದು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಲಿದೆ ಎಂದು ಅವರು ಹೇಳಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಬಿಹಾರಕ್ಕೆ ಭೇಟಿ ನೀಡಲಿದ್ದು, ರಾಷ್ಟ್ರೀಯ ಪಂಚಾಯತ್ ರಾಜ್ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ವೇಳೆ ಪ್ರಧಾನಿ ಅವರು ೧೩ ಸಾವಿರ ೪೮೦ ಕೋಟಿ ರೂಪಾಯಿಗಳಿಗೂ ಅಧಿಕ  ಮೌಲ್ಯದ ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ, ಶಿಲಾನ್ಯಾಸ ನೆರವೇರಿಸಿ, ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ಅದರಲ್ಲಿ ರೈಲ್ವೆ ಮತ್ತು ವಿದ್ಯುತ್ ವಲಯದ ಯೋಜನೆಗಳು ಸೇರಿವೆ.

ಮಧುಬನಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಧಾನಿಯವರು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ನಾಲ್ಕು ರೈಲುಗಳು, ಮೂರು ರೈಲು ಮಾರ್ಗಗಳು ಮತ್ತು ಎರಡು ರೈಲು ಮೇಲ್ಸೇತುವೆಗಳಿಗೆ ಹಸಿರು ನಿಶಾನೆ ತೋರಲಿದ್ದಾರೆ.

ಧ್ವನಿ: ಆನಂದ್ ಕುಮಾರ್

ಜಯನಗರದಿಂದ ಪಾಟ್ನಾಗೆ ನಡುವಿನ ನಮೋ ಭಾರತ್ ಕ್ಷಿಪ್ರ ರೈಲು ಮತ್ತು ಮುಂಬೈನ ಸಹರ್ಸಾದಿಂದ ಲೋಕಮಾನ್ಯ ತಿಲಕ್ ಟರ್ಮಿನಲ್‌ಗೆ ಅಮೃತ್ ಭಾರತ್ ಎಕ್ಸ್‌ಪ್ರೆಸ್‌ಗೆ ಪ್ರಧಾನಿ ಹಸಿರು ನಿಶಾನೆ ತೋರಲಿದ್ದಾರೆ. ಇದು ದೇಶದಲ್ಲಿ ಎರಡನೇ ನಮೋ ಭಾರತ್ ರೈಲು ಆಗಿದ್ದು, ಮೂರನೇ ಅಮೃತ್ ಭಾರತ್ ರೈಲು ಸೇವೆಯಾಗಿದೆ ಎಂದು ರೈಲ್ವೆ ಸಚಿವಾಲಯದ ಕಾರ್ಯನಿರ್ವಾಹಕ ನಿರ್ದೇಶಕ ದಿಲೀಪ್ ಕುಮಾರ್ ಆಕಾಶವಾಣಿಗೆ ತಿಳಿಸಿದ್ದಾರೆ.

ಧ್ವನಿ: ದಿಲೀಪ್ ಕುಮಾರ್

ಝುಂಜರ್‌ಪುರದ ಬಿದೇಶ್ವರ್ ಸ್ಥಾನದಲ್ಲಿ ಸಾರ್ವಜನಿಕ ಸಭೆ ಆಯೋಜಿಸಲಾಗಿದ್ದು, ಅಲ್ಲಿ ಪ್ರಧಾನಿ ಅವರು ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ನರೇಂದ್ರ ಮೋದಿ ಅವರು ಬೆಳಿಗ್ಗೆ ೧೧.೩೦ ಕ್ಕೆ ಸಾರ್ವಜನಿಕ ಸಮಾರಂಭ ಉದ್ದೇಶಿಸಿ ಮಾತನಾಡಲಿದ್ದಾರೆ. ಈ ವರ್ಷ ರಾಷ್ಟ್ರೀಯ ಪಂಚಾಯತ್ ರಾಜ್ ದಿನವನ್ನು "ಸಂಪೂರ್ಣ ಸರ್ಕಾರದ" ವಿಧಾನದ ಮೂಲಕ ಪ್ರಮುಖ ರಾಷ್ಟ್ರೀಯ ಕಾರ್ಯಕ್ರಮವಾಗಿ ಆಚರಿಸಲಾಗುತ್ತಿದೆ, ಇದರಲ್ಲಿ ಆರು ಕೇಂದ್ರ ಸಚಿವಾಲಯಗಳು - ಗ್ರಾಮೀಣಾಭಿವೃದ್ಧಿ ಸಚಿವಾಲಯ, ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ವಿದ್ಯುತ್ ಸಚಿವಾಲಯ, ರೈಲ್ವೆ ಸಚಿವಾಲಯ ಮತ್ತು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವಾಲಯಗಳು ಭಾಗವಹಿಸುತ್ತವೆ. ಇದೇ ವೇಳೆ ಪ್ರಧಾನಮಂತ್ರಿ ವಿವಿಧ ವಿಭಾಗಗಳಲ್ಲಿ ೨೦೨೫ರ ವಿಶೇಷ ವರ್ಗದ ರಾಷ್ಟ್ರೀಯ ಪಂಚಾಯತ್ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

<><><><>

ಚಾಮರಾಜನಗರದ ಮಲೆಮಹದೇಶ್ವರ ಬೆಟ್ಟದಲ್ಲಿ ಇಂದು ಕರ್ನಾಟಕ ಸರ್ಕಾರದ ವಿಶೇಷ ಸಚಿವ ಸಂಪುಟ ಸಭೆ ನಡೆಯಲಿದೆ.

ಸಭೆಯಲ್ಲಿ ಪ್ರಮುಖವಾಗಿ ಜಾತಿ ಗಣತಿ ವರದಿಯ ಕುರಿತಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರಿಂದ ಮಾಹಿತಿ ಸಂಗ್ರಹಿಸಲಿದ್ದಾರೆ. ವರದಿಯ ಸಾಧಕ-ಬಾಧಕಗಳ ಕುರಿತಂತೆಯೂ ಚರ್ಚೆ ನಡೆಸಲಿದ್ದಾರೆ.

ಇದೇ ವೇಳೆ, ಹೈನುಗಾರರಿಗೆ ಬಾಕಿ ಇರುವ ಪ್ರೋತ್ಸಾಹಧನ ಬಿಡುಗಡೆ ಮಾಡಲು ಸಚಿವ ಸಂಪುಟದಲ್ಲಿ ತೀರ್ಮಾನಿಸಬೇಕು. ಇದಲ್ಲದೆ ಸ್ಮಾರ್ಟ್ ಮೀಟರ್ ಹಾಗೂ ಜಮೀನುಗಳಿಗೆ ಟಿ.ಸಿ ಅಳವಡಿಕೆ ದರ ಕಡಿಮೆ ಮಾಡಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್. ಮಹೇಶ್ ಹಾಗೂ ಮಾಜಿ ಶಾಸಕ ಸಿ.ಎನ್ ನಿರಂಜನಕುಮಾರ್ ಒತ್ತಾಯಿಸಿದ್ದಾರೆ. ಸಂಪುಟ ಸಭೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಮಹದೇಶ್ವರ ಬೆಟ್ಟದಲ್ಲಿ ಮೂರು ದಿನ ಭಕ್ತರ ವಾಸ್ತವ್ಯಕ್ಕೆ ನಿರ್ಬಂಧ ವಿಧಿಸಲಾಗಿದೆ.

<><><><>

ಎರಡನೇ ಏಷ್ಯನ್ ಯೋಗಾಸನ ಚಾಂಪಿಯನ್‌ಶಿಪ್‌ಗಳು ನವದೆಹಲಿಯ ಇಂದಿರಾ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ನಾಳೆಯಿಂದ ಆರಂಭವಾಗಲಿವೆ. ಯೋಗಾಸನ ಭಾರತ್‌ದ ೩ ದಿನಗಳ ಈ ಕ್ರೀಡಾಕೂಟ ಈ ತಿಂಗಳ ೨೭ ರವರೆಗೆ ನಡೆಯಲಿದೆ. ಏಷ್ಯಾದ ೨೧ ದೇಶಗಳಿಂದ ೧೭೦ ಕ್ಕೂ ಅಧಿಕ ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ, ಅವರ ಜೊತೆಗೆ ಹಲವಾರು ತಾಂತ್ರಿಕ ಅಧಿಕಾರಿಗಳು ಮತ್ತು ತಂಡದ ವ್ಯವಸ್ಥಾಪಕರು ಹಾಗೂ ತರಬೇತುದಾರರು ಭಾಗವಹಿಸಲಿದ್ದಾರೆ. ಯೋಗಾಸನವನ್ನು ಸ್ಪರ್ಧಾತ್ಮಕ ಜಾಗತಿಕ ಕ್ರೀಡೆಯಾಗಿ ಉತ್ತೇಜಿಸುವ ಸರ್ಕಾರದ ಪ್ರಯತ್ನದ ಭಾಗವಾಗಿ ಈ ಕಾರ್ಯಕ್ರಮ ಏರ್ಪಡಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿ ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಯೋಗಕ್ಕೆ ಮನ್ನಣೆ ದೊರಕಿಸಿಕೊಟ್ಟರು ಮತ್ತು ಅದೀಗ ಕ್ರೀಡೆಯ ಸ್ಥಾನಮಾನ ಪಡೆದುಕೊಂಡಿದೆ ಎಂದು ವಿಶ್ವ ಯೋಗಾಸನದ ಪ್ರಧಾನ ಕಾರ್ಯದರ್ಶಿ ಡಾ. ಜಯದೀಪ್ ಆರ್ಯ ಹೇಳಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>